# ಕರ್ನಾಟಕ ವಿಧಾನ ಪರಿಷತ್

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: | 825 (883) |
| ಸದಸ್ಯರ ಹೆಸರು | ಶ್ರೀ ವೈ.ಎಂ ಸತೀಶ್<br>(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ: | 14.03.2025 |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ. | ವಿಜಯನಗರ ಜಿಲ್ಲೆ, ಹೂವಿನ ಹಡಗಲಿಯ ಕರ್ನಾಟಕ ಗ್ರಾಮೀಣ ಮೂಲ ಸೌಕರ್ಯ ಅಭಿವೃದ್ಧಿ ನಿಯಮಿತ (ಕೆಆರ್‌ಐಡಿಎಲ್) ಉಪವಿಭಾಗೀಯ ಕಚೇರಿಯಲ್ಲಿ ಸೂಕ್ತ ದಾಖಲೆಗಳಿಲ್ಲದೆ ಮತ್ತು ಕಾಮಗಾರಿಗಳನ್ನು ನಡೆಸದೆ ಖಾಸಗಿ ಉದ್ದಿಮೆಗಳಿಗೆ ಸುಮಾರು ರೂ.2.72 ಕೋಟಿಗಳ ಹಣವನ್ನು ನೀಡಿರುವುದು ನಿಜವೇ; (ಹಾಗಿದ್ದಲ್ಲಿ ಈ ಪ್ರಕರಣದ ಸಂಪೂರ್ಣ ವಿವರಗಳನ್ನು ಒದಗಿಸುವುದು) | ಕರ್ನಾಟಕ ಗ್ರಾಮೀಣ ಮೂಲ ಸೌಕರ್ಯ ಅಭಿವೃದ್ಧಿ ನಿಯಮಿತದ (ಕೆಆರ್‌ಐಡಿಎಲ್) ಹೂವಿನ ಹಡಗಲಿ ಉಪವಿಭಾಗೀಯ ಕಛೇರಿಯಲ್ಲಿ ಸೂಕ್ತ ದಾಖಲೆಗಳಿಲ್ಲದೆ ಮತ್ತು ಕಾಮಗಾರಿಗಳನ್ನು ನಡೆಸದೆ ಖಾಸಗಿ ಉದ್ದಿಮೆಗಳಿಗೆ ಸುಮಾರು ರೂ.2.72 ಕೋಟಿಗಳ ಹಣವನ್ನು ನೀಡಿರುವುದಾಗಿ ಆರೋಪವು ಬಂದಿದ್ದು, ಪ್ರಕರಣದ ಸತ್ಯಾಸತ್ಯತೆಯನ್ನು ಕಂಡುಕೊಳ್ಳುವ ಸಲುವಾಗಿ ಸಂಸ್ಥೆಯ ಮುಖ್ಯ ಅಭಿಯಂತರರು (ಉತ್ತರ) ಇವರ ಅಧ್ಯಕ್ಷತೆಯಲ್ಲಿ ಸಮಿತಿಯೊಂದನ್ನು ರಚಿಸಿ, ವರದಿಯನ್ನು ಸಲ್ಲಿಸಲು ದಿನಾಂಕ: 21.12.2024 ರಂದು ಆದೇಶವನ್ನು ಹೊರಡಿಸಲಾಗಿರುತ್ತದೆ. |
| ಆ. | ಹೂವಿನಹಡಗಲಿ ಕೆಆರ್‌ಐಡಿಎಲ್ ಉಪ ವಿಭಾಗದ ಸಹಾಯಕ ಕಾರ್ಯಪಾಲಕ ಅಭಿಯಂತರರು ಹಾಗೂ ಇಲ್ಲಿನ ಇತರೆ ಸರ್ಕಾರಿ ಅಧಿಕಾರಿಗಳ ಮೇಲೆ ಸರ್ಕಾರ ಕೈಗೊಂಡ ಕ್ರಮಗಳೇನು;<br><br>(ಮಾಹಿತಿ ಒದಗಿಸುವುದು) | ಕೆಆರ್‌ಐಡಿಎಲ್‌ನ ಹೂವಿನಹಡಗಲಿ ಉಪ ವಿಭಾಗದಲ್ಲಿ ನಡೆದಿದೆ ಎನ್ನಲಾದ ಆರ್ಥಿಕ ಅವ್ಯವಹಾರಕ್ಕೆ ಸಂಬಂಧಿಸಿದಂತೆ ರಚಿಸಲಾದ ಸಮಿತಿಯ ವರದಿಯು ಬಂದ ನಂತರ ಆರೋಪಿತ ಅಧಿಕಾರಿಗಳ ವಿರುದ್ಧ ಶಿಸ್ತು ಕ್ರಮ ಜರುಗಿಸಬೇಕಿದೆ. |
| ಇ. | ಈ ರೀತಿ ಸರ್ಕಾರದ ಅನುದಾನವನ್ನು ಕಾಮಗಾರಿ ನಡೆಸದೆ ಅಕ್ರಮವಾಗಿ ದುರುಪಯೋಗ ಮಾಡಿರುವ ಅಧಿಕಾರಿಗಳ ಮೇಲೆ ಕ್ರಿಮಿನಲ್ ಕೇಸ್ ದಾಖಲಿಸಿ, ಅವರುಗಳ ಆಸ್ತಿಯನ್ನು ಮುಟ್ಟುಗೋಲು ಹಾಕಿಕೊಳ್ಳಲು ಸರ್ಕಾರದ ತೀರ್ಮಾನಗಳೇನು? (ವಿವರ ಒದಗಿಸುವುದು) | ರಚಿಸಲಾದ ಸಮಿತಿಯ ವರದಿಯು ಬಂದ ನಂತರ ಮುಂದಿನ ಕ್ರಮ ಕೈಗೊಳ್ಳಲಾಗುವುದು. |

ಕಡತ ಸಂಖ್ಯೆ: ಗ್ರಾಅಪ/ಆರ್‌ಆರ್‌ಸಿ/ಎಲ್‌ಸಿಕ್ಯೂ/883/155ನೇಅ/ಪ್ರ.ಸಂ: 825 (883)/2025

(ಪ್ರಿಯಾಂಕ್ ಖರ್ಗೆ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಇಲಾಖೆ
ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು